**ಸಾಕ್ಷಿಯನ್ನು ದಿಃ 29.01.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು,
ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು,
ಸ್ಥಳ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು,
ಕಚ್ಚಾ ನಕ್ಷೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು,
ಐಎಂವಿ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 5 ಎಂದು,
ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 6 ಎಂದು,
ಅಮಾನತ್ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 7 ಎಂದು,
ಕಲಂ 133 ರ ಅಡಿಯ ನೋಟೀಸ್ ಮತ್ತು ಉತ್ತರ ಹಾಜರು ಪಡಿಸಿದ್ದು ಒಟ್ಟಾಗಿ ನಿಪಿ. 8 ಎಂದು,
ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 9 ಎಂದು,
ಒಂದು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು, ನಿಪಿ. 10 ಎಂದು,
ಪೋಲೀಸ್ ಇಂಟೀಮೇಷನ್ ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ. 11 ಎಂದು,
ಒಂದು ಐ.ಪಿ. ಬಿಲ್ ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ. 12 ಎಂದು,
ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 13 ಎಂದು,
ಪಾನ್ ಕಾರ್ಡ್ ನ ನೋಟರೀಕೃತ ದಾಖಲೆ ಹಾಜರುಪಡಿಸಿದ್ದು ನಿಪಿ. 14 ಎಂದು ಗುರುತಿಸಲಾಯಿತು. ಆದುದರಿಂದ ನಾನು ಕೋರಿರುವಂತೆ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

(ನಿಪಿ. 13 ಮತ್ತು ನಿಪಿ. 14 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ಸಮಯಾವಕಾಶವನ್ನು ಕೋರಿದ್ದು ನೀಡಲಾಯಿತು.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.